729 ಶ್ರೀ ಗೋಪಾಲ ಭಂಡಾರಿ ಹೆಚ್. (ಕಾರ್ಕಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮ ಪಂಚಾಯತ್‌ಗಳಿಗೆ ಚುನಾವಣೆ ನಡೆಸಲು ಎಷ್ಟು ಅವಧಿಯೊಳಗೆ ಮೀಸಲಾತಿಯ ಘೋಷಣೆ ಮಾಡಲಾಗುವುದು;

ಆ) ಚುನಾವಣೆಗೆ 6 ತಿಂಗಳು ಮೊದಲು ಮೀಸಲಾತಿಯನ್ನು ಘೋಷಿಸಬೇಕೆಂದು ಮಾನ್ಯ ಉಚ್ಚ ನ್ಯಾಯಾಲಯ ಆದೇಶ ಮಾಡಿದೆಯೇ;

ಇ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ನೇಮಕ ಮಾಡಲಾಗುವುದೇ;

ಈ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ನೇಮಕಕ್ಕೆ ನಡೆಸಿದ ಪರೀಕ್ಷೆಯ ಪ್ರಶ್ನೆ ಪ್ರತಿಕೆಗಳು ಬಯಲಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಮೀಸಲಾತಿ ಘೋಷಣೆಯನ್ನು ರಾಜ್ಯ ಚುನಾವಣಾ ಆಯೋಗದಿಂದ ಮಾಡಲಾಗುತ್ತದೆ.

ಆ) ರಿ. ಅ. ಸಂಖ್ಯೆ : 6093/2005 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿ: 11–2–2005 ರಲ್ಲಿ ನೀಡಿದ ತೀರ್ಪಿನನ್ವಯ ಗ್ರಾಮ ಪಂಚಾಯತಿಗಳ ಅವಧಿ ಮುಕ್ತಾಯವಾಗುವ ಕನಿಷ್ಠ ಒಂದು ವರ್ಷದ ಮುನ್ನ ಕ್ಷೇತ್ರವಾರು ಮೀಸಲಾತಿಯನ್ನು ಗ್ರಾಮ ಪಂಚಾಯತಿಯ ಜನತೆಯ ಮಾಹಿತಿಗಾಗಿ ಪ್ರಕಟಿಸಬೇಕೆಂದು ನಿರ್ದೇಶನ ನೀಡಿರುತ್ತದೆ.

ಇ) ನೇಮಕ ಮಾಡಲಾಗುವುದು

ಈ) ಪ್ರಶ್ನೆ ಪ್ರತಿಕೆ ಬಯಲಾಗಿರುವುದಿಲ್ಲ

628 ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ (ಅಫ್ಜಲ್‌ಪುರ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ ಹಾಗೂ ರಾಜ್ಯದಲ್ಲಿ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಗಳ ಕೊರತೆಯಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗು ತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇಲಾಖೆಯಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) :

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ 337 ಗ್ರಾಮ ಪಂಚಾಯಿತಿಗಳ ಪೈಕಿ 37 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹುದ್ದೆಗಳು ಹಾಗೂ ರಾಜ್ಯದಲ್ಲಿನ 5628 ಗ್ರಾಮ ಪಂಚಾಯಿತಿಗಳ ಪೈಕಿ ಪ್ರಸ್ತುತ 537 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹುದ್ದೆಗಳು ಖಾಲಿ ಇರುತ್ತವೆ. ಖಾಲಿ ಇರುವ ಹುದ್ದೆಗಳಿಗೆ ಪ್ರಭಾರ ವ್ಯವಸ್ಥೆ ಮಾಡಿರುವುದರಿಂದ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗಿರುವುದಿಲ್ಲ.

ಆ) ಈ ಹುದ್ದೆಗಳ ಪೈಕಿ ನೇರ ನೇಮಕಾತಿಯಿಂದ ತುಂಬಬೇಕಾದ 453 ಹುದ್ದೆಗಳಿಗೆ ಆಯ್ಕೆ ಪ್ರಕ್ರಿಯೆಯನ್ನು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ವಹಿಸಲಾಗಿದೆ. ಬಡ್ತಿ ಮೂಲಕ ತಂಬಬೇಕಾದ ಹುದ್ದೆಗಳ ಬಗ್ಗೆ ನಿಯಮಾನುಸಾರ ಕ್ರಮ ವಹಿಸಲು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ.

5 ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಖಾಸಗಿ ಕಂಪನಿಗಳು ದೂರವಾಣಿ ಟವರ್‌ಗಳನ್ನು ನಿರ್ಮಿಸಿದೆ?

ಆ) ಟವರ್‌ಗಳು ಮತ್ತು ಕಟ್ಟಡಗಳ ರಚನೆಗೆ ಖಾಸಗಿ ದೂರವಾಣಿ ಕಂಪನಿಯವರು ಸ್ಥಳೀಯ ಸಂಸ್ಥೆಗಳ ಅನುಮತಿ ಪಡೆದಿರುತ್ತಾರೆಯೇ?

ಇ) ಖಾಸಗಿ ಕಂಪನಿಗಳು ಗ್ರಾಮ ಪಂಚಾಯಿತಿಗಳಿಗೆ ಸಂದಾಯ ಮಾಡುತ್ತಿರುವ ವಾರ್ಷಿಕ ಶುಲ್ಕವೆಷ್ಟು?